ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಕೆಟ್ಟು ನಿಂತ ಶುದ್ಧ ನೀರಿನ ಘಟಕಗಳು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-

053 (406) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇದುವರೆವಿಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ಜಿಲ್ಲಾವಾರು ಸ್ಪಷ್ಟ ವಿವರ ಒದಗಿಸುವುದು)

(ಆ) ಈ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕೆ ಸರ್ಕಾರ ಇದುವರೆವಿಗೂ ಮಾಡಿರುವ ಖರ್ಚು ಎಷ್ಟು ; (ವಿವರ ನೀಡುವುದು)

(ಇ) ಸಾವಿರಾರು ಕೋಟಿ ರೂಪಾಯಿ ಖರ್ಚು ಮಾಡಿ ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಿದ್ದಾಗ್ಯೂ, ಅವುಗಳು ಸರಿಯಾಗಿ ಕಾರ್ಯನಿರ್ವಹಿಸದೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಿತವಾಗಿ ನಿರ್ವಹಿಸದಿರುವುದಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)